ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಟಿ.ಎ.ಶರವಣ ರವರ ನಿಯಮ 330ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

****

ಪ್ರಶ್ನೆ:-

ರಾಜ್ಯದ ಗೌರವಾನ್ವಿತ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಆರ್ಥಿಕ ಇಲಾಖೆಯಿಂದ ಸಹಮತಿ ಇಲ್ಲದೇ ಹಾಗೂ ಅನುಮೋದಿಸದೇ ಸಂಬಂಧಪಟ್ಟ ಇಲಾಖೆಯಿಂದ ಅನುದಾನದ ಆದೇಶಗಳನ್ನು ಹೊರಡಿಸುವಾಗ ಆರ್ಥಿಕ ಇಲಾಖೆಯ ಹೆಸರನ್ನು ಉಲ್ಲೇಖಿಸದಂತೆ ಸಂಬಂಧಪಟ್ಟ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಅನೇಕ ಬಾರಿ ಸೂಚನೆಗಳನ್ನು ನೀಡಿದ್ದರೂ ಸಹ ಸರ್ಕಾರಿ ಆದೇಶ ಸಂಖ್ಯೆ:MWD 552 MDS 2023, ದಿನಾಂಕ:13.11.2023 ರ ಆದೇಶದಂತೆ ಆರ್ಥಿಕ ಇಲಾಖೆಯ ಸಹಮತಿ ಇಲ್ಲದೇ ಹಾಗೂ ಅನುಮೋದಿಸದೆ 15 ದಿನಗಳ ಮುಂಚಿತವಾಗಿ ಯಾವ ಮಾನದಂಡಗಳನ್ನು ಅನುಸರಿಸಿ ರೂ.90.00ಕೋಟಿಗಳ ಆದೇಶವನ್ನು ಹೊರಡಿಸಲಾಗಿದೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ಹಾಗಿದ್ದಲ್ಲಿ, ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾವನೆ ಸಂಖ್ಯೆ:ಎಂಡಬ್ಲ್ಯುಡಿ ಎಂಡಿಎಸ್ /389/2024 ಇನ್ನೂ ಬಾಕಿ ಇರಲು ಕಾರಣಗಳೇನು ಹಾಗೂ ಯಾವ ಕಾಲಮಿತಿಯನ್ನು ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂಬುದರ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿತ ಬಯಸುತ್ತೇನೆ.

ಉತ್ತರ:-

ಸನ್ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿನ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಸ್ಲಂ/ಕಾಲೋನಿ ಪ್ರದೇಶಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.90.00ಕೋಟಿಗಳ ಅನುದಾನವನ್ನು ಆರ್ಥಿಕ ಇಲಾಖೆಯು ಅನುಮೋದನೆ ನೀಡಿದ ನಂತರ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಸರ್ಕಾರದ ಆದೇಶ ಸಂಖ್ಯೆ:MWD 552 MDS 2023, ದಿನಾಂಕ:03.11.2023 ರಲ್ಲಿ ಆದೇಶಿಸಿದೆ. ಸದರಿ ಆದೇಶದಂತೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಯಾವುದೇ ಮಂಜೂರು/ಬಿಡುಗಡೆ ಆದೇಶವನ್ನು ಹೊರಡಿಸಿರುವುದಿಲ್ಲ.

2023-24 ಮತ್ತು 2024-25ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಗೆ ವಿಧಾನಸಭಾ ಕ್ಷೇತ್ರವಾರು ರೂ.38.00 ಕೋಟಿಗಳನ್ನು ಮಂಜೂರು ಮಾಡಲಾಗಿರುತ್ತದೆ. ಮುಂದುವರೆದು ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಸಮುದಾಯದ ಜನರು ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕಾಮಗಾರಿಗಳಿಗೆ ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ದಿನಾಂಕ:22.07.2024 ರಂತೆ ಅನುದಾನ ಬಿಡುಗಡೆ ಮಾಡುವ ಕುರಿತ ಪ್ರಸ್ತಾವನೆಯು ಕಡತ ಸಂಖ್ಯೆ: MWD-MDS/389/2024 ರಲ್ಲಿ ಸರ್ಕಾರದ ಪರಿಶೀಲನೆಯಲ್ಲಿದೆ.

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು